ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1193 (1380)
ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್
ಉತ್ತರಿಸುವ ದಿನಾಂಕ : 18.03.2020
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

ಕ್ರ. ಸಂ	ವಿಷಯ	ಉತ್ತರ
ಅ)	ಕಳೆದ 3 ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ: ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಅಳವಡಿಸಲಾಗಿದೆಯೇ:	ಗಂಗಾ ಕಲ್ಯಾಣ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯ ಫಲಾನುಭವಿಗಳಿಗೆ 745 ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ. ಈ ಪೈಕಿ 435 ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಿದೆ. ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ 605 ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ. ಈ ಪೈಕಿ 397 ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಿದೆ.
ಆ)	2018-2019ನೇ ಸಾಲಿನಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಆಯ್ಕೆ ಸಮಿತಿಯಲ್ಲಿ ಯಾವ ಯಾವ ಯೋಜನೆಗಳಿವೆ: ಆ ಯೋಜನೆಯಲ್ಲಿ ಎಷ್ಟು ಫಲಾನುಭವಿಗಳು ಆಯ್ಕೆಯಾಗಿದ್ದಾರೆ? (ತಾಲ್ಲೂಕುವಾರು ವಿವರ ನೀಡುವುದು)	ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಲೆಮಾರಿ/ಅರೆ ಅಲೆಮಾರಿ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಸಮುದಾಯಗಳ ಅಭಿವೃದ್ಧಿಗಾಗಿ ಸ್ವಯಂ ಉದ್ಯೋಗ, ಉದ್ಯಮ ಶೀಲತಾ ಅಭಿವೃದ್ಧಿ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಭೂ ಒಡೆತನ ಯೋಜನೆ, ವಸತಿ ಯೋಜನೆ, ಲೇಔಟ್ ನಿರ್ಮಾಣ ಮತ್ತು ವಿಕಲಚೇತನರಿಗೆ ವಿಶೇಷ ಸೌಲಭ್ಯ ಕಲ್ಪಿಸುವ ಯೋಜನೆಗಳಿರುತ್ತವೆ. ಈ ಯೋಜನೆಗಳಲ್ಲಿ ಫಲಾಪೇಕ್ಷಿಗಳನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿಯಲ್ಲಿಯೇ ಆಯ್ಕೆ ಮಾಡಲಾಗುತ್ತದೆ. ಬೀದರ್ ಜಿಲ್ಲೆಯಲ್ಲಿ 2018-19ನೇ ಸಾಲಿನಲ್ಲಿ ನಿಗಮದ ವಿವಿಧ ಯೋಜನೆಗಳಡಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿಯಲ್ಲಿ ಯಾವುದೇ ಫಲಾಪೇಕ್ಷಿಗಳನ್ನು ಆಯ್ಕೆ ಮಾಡಿರುವುದಿಲ್ಲ.

ಸಕಇ 162 ಎಸ್‌ಡಿಸಿ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು